**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕಿಶೋರ್ ಕುಮಾರ್ ಪುತ್ತೂರು ಇವರು ನಿಯಮ-72 ರ ಮೇರೆಗೆ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಹೇಳಿಕೆ:**

**ಪ್ರಶ್ನೆ:**

ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯ ಕಡಬ, ಬೆಳ್ತಂಗಡಿ ಹಾಗೂ ಪುತ್ತೂರು ತಾಲ್ಲೂಕಿನ ಹೆಚ್ಚಿನ ಭಾಗಗಳಲ್ಲಿ ಆನೆ ಹಾವಳಿಯನ್ನು ತಡೆಗಟ್ಟಲು ಆನೆ ನಿಗ್ರಹ ಪಡೆಯನ್ನು (ಇ.ಟಿ.ಎಫ್) ರಚಿಸಲಾಗುವುದು ಎಂದು ಸರ್ಕಾರ ಘೋಷಿಸಿದ್ದರೂ ಕೂಡ ಈವರೆಗೂ ಯಾವುದೇ ಕ್ರಮ ಕೈಗೊಂಡಿಲ್ಲವಾದ್ದರಿಂದ ಆನೆ ಹಾವಳಿಯಿಂದ ರೈತರು ತಮ್ಮ ತೋಟ ಹಾಗೂ ಬೆಳೆಗಳನ್ನು ಕಳೆದುಕೊಂಡು ತೀವ್ರ ಸಂಕಷ್ಟಕ್ಕೆ ತುತ್ತಾಗುತ್ತಿದ್ದಾರೆ. ಇದರಿಂದಾಗಿ ಈ ಭಾಗದ ರೈತರು ಅಲ್ಲಲ್ಲಿ, ನಿರಂತರವಾಗಿ ಪ್ರತಿಭಟಿಸುತ್ತಾ, ಪರಿಹಾರಕ್ಕಾಗಿ ಆಗ್ರಹಿಸುತ್ತಿದ್ದಾರೆ. ಆದ್ದರಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಆನೆ ನಿಗ್ರಹ ಪಡೆಯನ್ನು ಕೂಡಲೇ ಸ್ಥಾಪಿಸುವ ಬಗ್ಗೆ ಸಂಬಂಧಿಸಿದವರಿಗೆ ಸೂಕ್ತ ನಿರ್ದೇಶನ ನೀಡಿ ಈವರೆಗೆ ಕೈಗೊಂಡ ಕ್ರಮಗಳ ಬಗ್ಗೆ ಸೂಕ್ತ ಮಾಹಿತಿಯನ್ನು ಒದಗಿಸುವ ಕುರಿತು.

**ಹೇಳಿಕೆ:**

ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ವಿಭಾಗದ ಉಪ್ಪಿನಂಗಡಿ, ಸುಳ್ಯ, ಕಡಬ, ಬೆಳ್ತಂಗಡಿ, ಪುತ್ತೂರು, ಪಂಜ ಮತ್ತು ಸುಬ್ರಹ್ಮಣ್ಯ ವಲಯಗಳ ವ್ಯಾಪ್ತಿಯಲ್ಲಿ ಕಾಡಾನೆಗಳ ಹಾವಳಿಯನ್ನು ನಿಯಂತ್ರಿಸಲು, ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು ವಿಭಾಗಕ್ಕೆ ಆನೆ ಕಾರ್ಯ ಪಡೆ (E.T.F.) ಯನ್ನು ರಚನೆ ಮಾಡುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.

ಸಂಖ್ಯೆ: ಅಪಜೀ 366 ಎಫ್ ಡಬ್ಲ್ಯೂ ಎಲ್ 2025

(ಈಶ್ವರ ಬಿ. ಖಂಡ್ರೆ)
ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು